ಅಭಿಯಾಚನೆ ಕ್ರಮಾಂಕ 52-ಮಾಹಿತಿ ತಂತ್ರಜ್ಞಾನ

ರಾಜ್ಯಪಾಲರ ಶಿಫಾರಸ್ಸಿನ ಮೇರೆಗೆ 31-3-2001ರಂದು ಕೊನೆಗೊಳ್ಳುವ ಆರ್ಥಿಕ ವರ್ಷದಲ್ಲಿ ''ಮಾಹಿತಿ ತಂತ್ರಜ್ಞಾನ'' ಸಂದಾಯ ಮಾಡುವಲ್ಲಿ ಬರತಕ್ಕಂಥ ವೆಚ್ಚವನ್ನು ವಹಿಸಲು ಸರ್ಕಾರಕ್ಕೆ ರಾಜಸ್ವ ಖಾತೆಯಲ್ಲಿ 985,00,000 ರೂಪಾಯಿಗಳಿಗಿಂತ ಮೀರದ ಮೊತ್ತವನ್ನು ಮತ್ತು ಬಂಡವಾಳ ಖಾತೆಯಲ್ಲಿ 700,00,000 ರೂಪಾಯಿಗಳಿಗಿಂತ ಮೀರದ ಮೊತ್ತವನ್ನು (ಲೇಖಾನುದಾನವಾಗಿ ಮಂಜೂರಾದ ಮೊತ್ತವೂ ಸೇರಿದಂತೆ) ಮಂಜೂರು ಮಾಡುವುದು.

3. ಶಾಸನ ರಚನಾ ಕಾರ್ಯಕಲಾಪ

ಅ) ವಿಧೇಯಕಗಳ ಮಂಡನೆ

1) ಕರ್ನಾಟಕ ಧನವಿನಿಯೋಗ (ಸಂಖ್ಯೆ 1) ವಿಧೇಯಕ, 2000.

ಮಂಡನೆಗೆ ಅನುಮತಿ ಕೋರಿಕೆ

ಶ್ರೀ ಎಸ್.ಎಂ. ಕೃಷ್ಣ (ಮುಖ್ಯಮಂತ್ರಿ): ಮಾನ್ಯ ಅಧ್ಯಕ್ಷರೆ, 2000ದ ಸಾಲಿನ ಕರ್ನಾಟಕ ಧನ ವಿನಿಯೋಗ (ಸಂಖ್ಯೆ 1) ವಿಧೇಯಕವನ್ನು ಮಂಡಿಸಲು ಸಭೆಯ ಅನುಮತಿಯನ್ನು ಕೋರುತ್ತೇನೆ.

ಅಧ್ಯಕ್ಷರು: ಪ್ರಸ್ತಾಪ ಏನೆಂದರೆ,

ಕರ್ನಾಟಕ ಧನವಿನಿಯೋಗ (ಸಂಖ್ಯೆ 1) ವಿಧೇಯಕ, 2000 ಇದನ್ನು ಮಂಡಿಸಲು ಅನುಮತಿ ನೀಡುವುದು.

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು ಮತ್ತು ಅನುಮತಿ ನೀಡಲಾಯಿತು

ಶ್ರೀ ಎಸ್.ಎಂ. ಕೃಷ್ಣ (ಮುಖ್ಯಮಂತ್ರಿಗಳು): ಮಾನ್ಯ ಅಧ್ಯಕ್ಷರೆ, ಕರ್ನಾಟಕ ಧನವಿನಿಯೋಗ (ಸಂಖ್ಯೆ 1) 2000 ವಿಧೇಯಕವನ್ನು ಸಭೆಯ ಮುಂದೆ ಮಂಡಿಸುತ್ತೇನೆ.

ಅಧ್ಯಕ್ಷರು: ವಿಧೇಯಕವನ್ನು ಮಂಡಿಸಲಾಗಿದೆ.

2) ಕರ್ನಾಟಕ ಸರಕುಗಳ ಪ್ರವೇಶದ ಮೇಲಿನ ತೆರಿಗೆ (ತಿದ್ದುಪಡಿ) ವಿಧೇಯಕ, 2000

ಮಂಡನೆಗೆ ಅನುಮತಿ ಕೋರಿಕೆ

ಶ್ರೀ ಎಸ್.ಎಂ.ಕೃಷ್ಣ (ಮುಖ್ಯಮಂತ್ರಿಗಳು) : ಮಾನ್ಯ ಅಧ್ಯಕ್ಷರೆ, ಕರ್ನಾಟಕ ಸರಕುಗಳ ಪ್ರವೇಶದ ಮೇಲಿನ ತೆರಿಗೆ (ತಿದ್ದುಪಡಿ) ವಿಧೇಯಕ 2000ಇದನ್ನು ಮಂಡಿಸಲು ಸಭೆಯ ಅನುಮತಿಯನ್ನು ಕೋರುತ್ತೇನೆ.

ಅಧ್ಯಕ್ಷರು: ಪ್ರಸ್ತಾವ ಏನೆಂದರೆ,

ಕರ್ನಾಟಕ ಸರಕುಗಳ ಪ್ರವೇಶದ ಮೇಲಿನ ತೆರಿಗೆ (ತಿದ್ದುಪಡಿ) ವಿಧೇಯಕ 2000 ಇದನ್ನು ಮಂಡಿಸಲು ಅನುಮತಿ ನೀಡುವುದು.